## ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2204 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 26.03.2026 |
| ಉತ್ತರಿಸುವ ಸಚಿವರು | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಮಾಹಿತಿ |
|---|---|---|
| ಅ) | ಸಿಂಧನೂರು ತಾಲ್ಲೂಕಿನ ನ್ಯಾಯಾಲಯದಲ್ಲಿ 05 ಕೋರ್ಟ್ ಬೆಂಚುಗಳು ಕಾರ್ಯನಿರ್ವಹಿಸುತ್ತಿದ್ದು, ಅಗತ್ಯ ಕೋರ್ಟ್ ಹಾಲ್‌ಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಯಚೂರು ಜಿಲ್ಲೆಯ ಸಿಂಧನೂರಿನ ಹಳೆಯ ನ್ಯಾಯಾಂಗ ಕಟ್ಟಡದಲ್ಲಿ ಪ್ರಸ್ತುತ ಐದು (05) ನ್ಯಾಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಅಗತ್ಯ ಕೋರ್ಟ್ ಹಾಲ್‌ಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಆ) | ಒಟ್ಟು ಐದು ನ್ಯಾಯಾಧೀಶರು ಕರ್ತವ್ಯ ನಿರ್ವಹಿಸುತ್ತಿದ್ದು, ಕೇವಲ 02 ವಸತಿ ಗೃಹಗಳು ಮಾತ್ರ ಇರುವುದು ಸರ್ಕಾರದ ಗಮನದಲ್ಲಿದೆಯೇ: | ಹೌದು |
| ಇ) | ನ್ಯಾಯಾಲಯದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರದಿಂದ ಈ ಸಂಬಂಧ ಯಾವ ಕ್ರಮ ವಹಿಸಲಾಗಿದೆ: (ತಿಳಿಸುವುದು) | ರಾಯಚೂರು ಜಿಲ್ಲೆಯ ಸಿಂಧನೂರಿನ ನ್ಯಾಯಾಲಯದಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು, ಸದರಿ ನ್ಯಾಯಾಲಯದ ಆವರಣದಲ್ಲಿ ಹೈಟೆಕ್ ಶೌಚಾಲಯ ಬ್ಲಾಕ್ ನಿರ್ಮಾಣಕ್ಕಾಗಿ ರೂ.25.00 ಲಕ್ಷ ಅನುದಾನವನ್ನು ಮಂಜೂರು ಮಾಡುವಂತೆ ಕರ್ನಾಟಕ ಉಚ್ಚ ನ್ಯಾಯಾಲಯವು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ ಇವರನ್ನು ಕೋರಿರುತ್ತದೆ.<br>ಮುಂದುವರಿದು, ಈ ಕೆಳಗಿನ ನವೀಕರಣ |

| | | | |
|---|---|---|---|
| | | | ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲು ಲಭ್ಯವಿರುವ ಮೀಸಲು ಅನುದಾನದಲ್ಲಿ ರೂ.109.15 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆ ಮಾಡುವಂತೆ ಮತ್ತು ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಅಗತ್ಯ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲು ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ವಿಭಾಗ, ರಾಯಚೂರು ಇವರಿಗೆ ನಿರ್ದೇಶಿಸುವಂತೆ ಕರ್ನಾಟಕ ಉಚ್ಚ ನ್ಯಾಯಾಲಯವು ಮುಖ್ಯ ಅಭಿಯಂತರರು, ಸಿ & ಬಿ (ಈಶಾನ್ಯ), ಲೋಕೋಪಯೋಗಿ ಇಲಾಖೆ, ಕಲಬುರಗಿ, ಇವರನ್ನು ಕೋರಿರುತ್ತದೆ.<br><br>1. ನ್ಯಾಯಾಂಗ ಕಟ್ಟಡದ ಸುತ್ತಮುತ್ತಲಿನಲ್ಲಿ ಇಂಟರ್‌ಲಾಕ್ ಪೇವರ್ ಬ್ಲಾಕ್‌ಗಳ ಅಳವಡಿಕೆ ಮತ್ತು ಸೈಡ್ ಡ್ರೈನ್ ನಿರ್ಮಾಣ, ಕೋರ್ಟ್ ಮೈದಾನದಲ್ಲಿ ಹೈಟೆಕ್ ಶೌಚಾಲಯ ಕಟ್ಟಡ ನಿರ್ಮಾಣ ಮತ್ತು ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಬಾರ್ ಅಸೋಸಿಯೇಷನ್ ಕಟ್ಟಡದ ಮುಂದೆ ಶೀಟ್ ರೂಫ್ ನಿರ್ಮಾಣಕ್ಕಾಗಿ- ರೂ.31.45 ಲಕ್ಷಗಳು.<br>2. ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ನ್ಯಾಯಾಂಗ ಸಂಕೀರ್ಣದಲ್ಲಿ 3ನೇ ಹೆಚ್ಚುವರಿ ನ್ಯಾಯಾಲಯ ಸಭಾಂಗಣದ ನವೀಕರಣಕ್ಕಾಗಿ - ರೂ.28.50 ಲಕ್ಷಗಳು.<br>3. ಸಿಂಧನೂರಿನಲ್ಲಿರುವ ನ್ಯಾಯಾಂಗ ಸಂಕೀರ್ಣದಲ್ಲಿ 2 ನೇ ಡಿವಿಜನ್ ಜಡ್ಜ್, ಜೆಎಂಎಫ್‌ಸಿ ನ್ಯಾಯಾಲಯ ಸಭಾಂಗಣದ ಸ್ಥಳಾಂತರ ಮತ್ತು ನವೀಕರಣಕ್ಕಾಗಿ- ರೂ.11.20 ಲಕ್ಷಗಳು<br>4. ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಹೊಸದಾಗಿ ಸ್ಥಾಪಿಸಲಾದ 3ನೇ ಹೆಚ್ಚುವರಿ ನ್ಯಾಯಾಲಯಕ್ಕೆ ವಿದ್ಯುದ್ದೀಕರಣಕ್ಕಾಗಿ ರೂ.38.00 ಲಕ್ಷಗಳು |

| | | |
|---|---|---|
| | | ಪ್ರಸ್ತುತ ಮೇಲ್ಕಂಡ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆ, ಕಲಬುರಗಿ ಇವರಿಂದ ಕೈಗೊಳ್ಳುವುದನ್ನು ನಿರೀಕ್ಷಿಸಲಾಗಿದೆ. |
| ಈ) | ಯಾವ ಕಾಲಮಿತಿಯೊಳಗೆ ಸದರಿ ನ್ಯಾಯಾಲಯದಲ್ಲಿ ಅಗತ್ಯ ಕೋರ್ಟ್ ಹಾಲ್‌ಗಳ ನಿರ್ಮಾಣ. ಎಲ್ಲಾ ನ್ಯಾಯಾಧೀಶರುಗಳಿಗೆ ಅಗತ್ಯ ವಸತಿ ಗೃಹಗಳು ಹಾಗೂ ಮೂಲಭೂತ ಸೌಕರ್ಯಗಳನ್ನು ಸರ್ಕಾರದಿಂದ ಕಲ್ಪಿಸಲಾಗುವುದು? | ಲೋಕೋಪಯೋಗಿ ಇಲಾಖೆಯಿಂದ ಅಗತ್ಯವಿರುವ ಅನುದಾನ ಬಿಡುಗಡೆಯಾದ ನಂತರ, ಕೆಟಿಪಿಪಿ ಟೆಂಡರ್ ನಿಯಮಗಳ ಪ್ರಕಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಲಾ-ಎಲ್‌ಎಎಂ/38/2026

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು



File No. LAW-LAM/38/2026-ADMN1-LAW SEC (Computer No. 2106216)
Generated from eOffice by H K PATIL, MIN-LAW(HKP), MINISTER, MINISTER - LAW on 23/03/2026 12:36 PM